ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1533
ಮಾನ್ಯ ಸದಸ್ಯರ ಹೆಸರು	ಶ್ರೀಮತಿ ಎಸ್. ವೀಣಾ ಅಚ್ಚಯ್ಯ
ಉತ್ತರಿಸಬೇಕಾದ ದಿನಾಂಕ	11.03.2022
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕೊಡುಗು, ಪುತ್ತೂರು, ಸೂಳ್ಯ ಮತ್ತು ರಾಜ್ಯದ ಇತರೆಡೆ ವಾಸವಾಗಿರುವ ಅತ್ಯಂತ ಕಡಿಮೆ ಜನಸಂಖ್ಯೆ ಹೊಂದಿರುವ "ಅರೆಭಾಷೆ ಗೌಡ" ಜನಾಂಗಕ್ಕೆ ಸಂಬಂಧಿಸಿದಂತೆ "ಅರೆಭಾಷೆ ಗೌಡ" ಜನಾಂಗದ ಅಭಿವೃದ್ಧಿ ನಿಗಮವನ್ನು ಸರ್ಕಾರ ಇದುವರೆಗೂ ಸ್ಥಾಪಿಸದಿರಲು ಕಾರಣವೇನು?	ಭಾರತ ಸಂವಿಧಾನದ ಅನುಚ್ಛೇದ 15(4)ರಂತೆ ವಿದ್ಯಾ ಸಂಸ್ಥೆಗಳಲ್ಲಿ ಪ್ರವೇಶ ಮತ್ತು ಅನುಚ್ಛೇದ 16(4)ರ ಮೇರೆಗೆ ನೇಮಕಾತಿಗಳಲ್ಲಿ ಮೀಸಲಾತಿಗಳನ್ನು ಕಲ್ಪಿಸಲು ರಾಜ್ಯದಲ್ಲಿ ಹಿಂದುಳಿದ ವರ್ಗಗಳನ್ನು ಗುರುತಿಸಿ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000 ದಿನಾಂಕ: 30.03.2002ರಲ್ಲಿ ಅರೆಭಾಷೆ ಗೌಡ ಜನಾಂಗದ ಹೆಸರು ಇರುವುದಿಲ್ಲ. ಹಾಗೂ ನಿಗಮ ಸ್ಥಾಪಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.
ಆ)	"ಅರೆಭಾಷೆ ಗೌಡ ಜನಾಂಗದ ಅಭಿವೃದ್ಧಿ ನಿಗಮ"ವನ್ನು ಸ್ಥಾಪಿಸುವ ಕುರಿತು ಸರ್ಕಾರ 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲು ಕ್ರಮವಹಿಸುವುದೇ;	ಉದ್ಭವಿಸುವುದಿಲ್ಲ
ಇ)	"ಅರೆಭಾಷೆ ಗೌಡ ಜನಾಂಗದ ಅಭಿವೃದ್ಧಿ ನಿಗಮ"ವನ್ನು ಸ್ಥಾಪಿಸುವ ಕುರಿತು ಸರ್ಕಾರ 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸುವ ಮೂಲಕ, ಅರೆಭಾಷೆ ಗೌಡ ಜನಾಂಗದ ಅಭಿವೃದ್ಧಿಗೆ ಸರ್ಕಾರ ಮುಂದಾಗುವುದೇ?	

ಸಂಖ್ಯೆ: ಹಿಂವಕ 50 ಬಿಸಿಎ 2022

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು